ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು-560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9-ನೇಮಕಾತಿ-ವಿವ-4/2015-16 ದಿನಾಂಕ: 28.03.2016 ಮತ್ತು ಬಿ9-ನೇಮಕಾತಿ-ವಿವ-3/2015-16 ದಿನಾಂಕ: 23.03.2016**

## 460 ಉಪ ವಲಯ ಅರಣ್ಯಾಧಿಕಾರಿ ಹಾಗೂ 555 ಅರಣ್ಯ ರಕ್ಷಕ ಹುದ್ದೆಗಳಿಗೆ ನೇರ ನೇಮಕಾತಿ

* * * * *

460 ಉಪ ವಲಯ ಅರಣ್ಯಾಧಿಕಾರಿ ಹಾಗೂ 555 ಅರಣ್ಯ ರಕ್ಷಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಕುರಿತು ದಿನಾಂಕ: 20.11.2016 ರಂದು ಲಿಖಿತ ಪರೀಕ್ಷೆಯನ್ನು ನಡೆಸಿ, ಅಭ್ಯರ್ಥಿಗಳು ಪಡೆದ ಅಂಕಗಳನ್ನು ಈಗಾಗಲೇ ಪ್ರಕಟಪಡಿಸಲಾಗಿರುತ್ತದೆ. ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಪಡೆದ ಅಂಕಗಳು ಸೇರಿದಂತೆ ಮೆರಿಟ್ ಆಧಾರದಂತೆ ಮತ್ತು ಚಾಲ್ತಿಯಲ್ಲಿರುವ ಎಲ್ಲಾ ಮೀಸಲಾತಿ ನಿಯಮಗಳ ಅನುಸಾರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ ಹಾಗೂ ಕಾಯುವಿಕೆ ಪಟ್ಟಿಯನ್ನು ಸಹ ಪ್ರಕಟಿಸಲಾಗಿದೆ. ಈ ಪಟ್ಟಿ ಕುರಿತು ಯಾವುದಾದರೂ ಅಭ್ಯರ್ಥಿಯ ಆಕ್ಷೇಪಣೆ ಇದ್ದಲ್ಲಿ ಈ ಕಛೇರಿಗೆ ಲಿಖಿತ ರೂಪದಲ್ಲಿ 03.02.2017 ರೊಳಗಾಗಿ ಸಲ್ಲಿಸಬಹುದಾಗಿದೆ.

ಕರ್ನಾಟಕ ಅರಣ್ಯ ಇಲಾಖೆಯಲ್ಲಿ ಪ್ರಸ್ತುತ ವಲಯ ಅರಣ್ಯಾಧಿಕಾರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು ಹಾಗೂ ಉಪ ವಲಯ ಅರಣ್ಯಾಧಿಕಾರಿ ಹುದ್ದೆಯ ಬಿ.ಎಸ್ಸಿ. ಅರಣ್ಯಶಾಸ್ತ್ರ (ಹೈದರಾಬಾದ್ – ಕರ್ನಾಟಕ) ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಹೀಗಾಗಿ, ಉಪ ವಲಯ ಅರಣ್ಯಾಧಿಕಾರಿ (ಬಿ.ಎಸ್ಸಿ. ಅರಣ್ಯಶಾಸ್ತ್ರ) ಹುದ್ದೆಗಳಿಗೆ ಆಯ್ಕೆ ಸಂಬಂಧ ಪರಿಶೀಲಿಸಲು ಲಿಖಿತ ಪರೀಕ್ಷೆ ಬರೆದಿರುವ ಎಲ್ಲಾ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆಗೆ ಹಾಗೂ ವೈದ್ಯಕೀಯ ಪರೀಕ್ಷೆಗೆ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ಶೈಕ್ಷಣಿಕ ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳ ಕುರಿತು ಮೂಲ ದಾಖಲೆಗಳ ಪರಿಶೀಲನೆ ಹಾಗೂ ಈ ಮೂಲ ದಾಖಲೆಗಳನ್ನು ಇಲಾಖಾ ವಶ ನೀಡಲು ಮತ್ತು ನಿಗಧಿತ ವೈದ್ಯಕೀಯ ಪರೀಕ್ಷೆಗಳಿಗಾಗಿ ಹಾಜರಾಗಬೇಕಾದ ವಿವರವನ್ನು ಸಹ ಪಟ್ಟಿಯಲ್ಲಿ ಪ್ರಕಟಿಸಲಾಗಿದೆ.

ಈ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಅವರ ಹೆಸರಿನ ಎದುರು ನಮೂದಿಸಿರುವ ಸಂಬಂಧಿಸಿದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರ ಸಮ್ಮುಖ ಈ ಕೆಳಕಂಡ ದಿನಾಂಕಗಳಂದು ಎಲ್ಲಾ ಮೂಲ ದಾಖಲಾತಿಗಳೊಂದಿಗೆ ಹಾಗೂ ಮೂರು ಭಾವಚಿತ್ರದೊಂದಿಗೆ ಹಾಜರಾಗತಕ್ಕದ್ದು. ಮೂಲ ದಾಖಲೆಗಳ ಪರಿಶೀಲನೆ ಹಾಗೂ ವೈದ್ಯಕೀಯ ಪರೀಕ್ಷೆ ಒಂದು ದಿನಕ್ಕಿಂತ ಹೆಚ್ಚು ದಿನಗಳು ತಗಲುವ ಸಂಭವ ಇರುವುದರಿಂದ ಎಲ್ಲಾ ಪೂರ್ವಸಿದ್ದತೆಯನ್ನು ಅಭ್ಯರ್ಥಿಗಳು ಮಾಡಿಕೊಳ್ಳಲು ತಿಳಿಸಿದೆ. ಕಾಯುವಿಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಪ್ರಸ್ತುತ ಮೂಲ ದಾಖಲೆಗಳ ಪರಿಶೀಲನೆಗೆ ಹಾಗೂ ವೈದ್ಯಕೀಯ ಪರೀಕ್ಷೆಗೆ ಹಾಜರಾಗಬೇಕಾದ ಅವಶ್ಯಕತೆ ಇರುವುದಿಲ್ಲ. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಹಾಜರಾಗಬೇಕಾದ ದಿನಾಂಕದ ವಿವರ ಈ ಕೆಳಕಂಡಂತಿದೆ.

| ಕ್ರ.ಸಂ. | ಹುದ್ದೆ | ಹಾಜರಾಗಬೇಕಾದ ದಿನಾಂಕ |
|---|---|---|
| 1 | ಅರಣ್ಯ ರಕ್ಷಕ | 13.02.2017 |
| 2 | ಉಪ ವಲಯ ಅರಣ್ಯಾಧಿಕಾರಿ (ಬಿ.ಎಸ್ಸಿ. ವಿಜ್ಞಾನ) | 15.02.2017 |
| 3 | ಉಪ ವಲಯ ಅರಣ್ಯಾಧಿಕಾರಿ (ಬಿ.ಎಸ್ಸಿ. ಅರಣ್ಯಶಾಸ್ತ್ರ) | 17.02.2017 |

ಈ ಮಾಹಿತಿಯನ್ನು ಅರಣ್ಯ ಇಲಾಖೆಯ ವೆಬ್‌ಸೈಟ್ www.aranya.gov.in ನಲ್ಲಿ ಪ್ರಕಟಿಸಲಾಗಿದೆ.

ಬೆಂಗಳೂರು
ದಿನಾಂಕ: 25-01-2017

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)